**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**21.09.2024 / 18.40 hrs**

ಮುಖ್ಯಾಂಶಗಳು

೧. ಸುಳ್ಳು ಸುದ್ದಿಯ ಸೃಷ್ಟಿಕರ್ತರಿಗೆ ಕಠಿಣ ಶಿಕ್ಷೆಯ ಎಚ್ಚರಿಕೆ ನೀಡಿದ ರಾಜ್ಯ ಸರ್ಕಾರ

೨. ತಿರುಪತಿ ಲಡ್ಡುವಿಗೆ ಪ್ರಾಣಿ ಜನ್ಯ ಕೊಬ್ಬು ಬಳಕೆ ವಿಚಾರ - ತನಿಖೆಗೆ ಸಚಿವ ಎಂ.ಬಿ. ಪಾಟೀಲ್ ಆಗ್ರಹ

೩. ಬೀದಿ ನಾಯಿಗಳಿಗೆ ಪ್ರಾಯೋಗಿಕವಾಗಿ ಮೈಕ್ರೋ ಚಿಪ್ ಅಳವಡಿಕೆಗೆ ಬಿಬಿಎಂಪಿ ನಿರ್ಧಾರ

೪. ದೇಶವನ್ನು ಆರ್ಥಿಕವಾಗಿ ಮುಂಚೂಣಿಗೆ ತರಲು ಪ್ರತಿಯೊಬ್ಬ ನಾಗರಿಕರ ಸಹಕಾರ ಅತ್ಯಗತ್ಯ - ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

೫. ತಂತ್ರಜ್ಞಾನಗಳನ್ನು ರೈತರಿಗೆ ತಲುಪಿಸುವಲ್ಲಿ ಕೃಷಿ ಮೇಳ ಸಹಾಯಕಾರಿ - ಕೇಂದ್ರ ಆಹಾರ ಸಚಿವ ಪ್ರಲ್ಹಾದ್ ಜೋಶಿ

<><*<><>*><>

ಸುಳ್ಳು ಸುದ್ದಿಗಳಿಗೆ ಬ್ರೇಕ್ ಹಾಕದಿದ್ದರೆ ಸಮಾಜದ ಪ್ರತಿಯೊಬ್ಬರ ನೆಮ್ಮದಿ ಹಾಳಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಮೈಸೂರು ಮಾನಸ ಗಂಗೋತ್ರಿಯಲ್ಲಿ ಜಿಲ್ಲಾ ಪತ್ರಕರ್ತರ ಸಂಘ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಉದ್ಘಾಟಿಸಿ, ಮಾತನಾಡಿದ ಅವರು ವಾಕ್ ಸ್ವಾತಂತ್ರ್ಯ ನಮಗೆ ನಮ್ಮ ಸಂವಿಧಾನ ನೀಡಿರುವ ಅತ್ಯುನ್ನತ ಮೌಲ್ಯವಾಗಿದೆ ಎಂದು ತಿಳಿಸಿದರು. ಸಂವಿಧಾನದ ಮೂರು ಅಂಗಗಳಿಗೆ ಅಪಾಯ ಬಂದರೆ ಸಮಾಜಕ್ಕೆ ಅಪಾಯ ಬಂದಂತೆ. ವಾಕ್ ಸ್ವಾತಂತ್ರ್ಯ ಆಚರಿಸುವ ಪತ್ರಿಕಾ ರಂಗಕ್ಕೆ ಯಾವ ನಿರ್ಬಂಧಗಳೂ ಇರಬಾರದು ಎನ್ನುವುದನ್ನು ಪಂಡಿತ್ ನೆಹರೂ ಅವರೂ ಒತ್ತಿ ಹೇಳಿದ್ದರು ಎಂದು ಮಾಹಿತಿ ನೀಡಿದರು. ಸುಳ್ಳು ಸುದ್ದಿಯ ಸೃಷ್ಟಿಕರ್ತರಿಗೆ ಕಠಿಣ ಶಿಕ್ಷೆ ಕೊಡಿಸುವ ನಿಟ್ಟಿನಲ್ಲಿ ಕಾನೂನು ರಚಿಸಲಾಗಿದೆ ಎಂದು ತಿಳಿಸಿದರು.

<><*<><>*><>

ಧಾರ್ಮಿಕವಾಗಿ ಪಾವಿತ್ರ್ಯತೆ ಹೊಂದಿರುವ ತಿರುಪತಿ ಲಡ್ಡುವಿಗೆ ಪ್ರಾಣಿ ಜನ್ಯ ಕೊಬ್ಬನ್ನು ಸೇರಿಸಿದ್ದಾರೆ ಎಂಬ ಆರೋಪ ಕೇಳಿಬಂದಿದ್ದು ಇದು ನಿಜವೇ ಆಗಿದ್ದಲ್ಲಿ ತುಂಬಾ ಆಘಾತಕಾರಿ ವಿಷಯವಾಗಿದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಈ ಬಗ್ಗೆ ತನಿಖೆ ನಡೆದು, ತಪ್ಪು ಮಾಡಿದವರಿಗೆ ಶಿಕ್ಷೆ ನೀಡುವಂತೆ ಒತ್ತಾಯಿಸಿದ್ದಾರೆ. ತಿರುಪತಿಗೆ ಕೆಎಂಎಫ್ ತುಪ್ಪ ಪೂರೈಸುತ್ತಿದ್ದಾಗ ಕಲಬೆರಕೆ ಇತ್ಯಾದಿ ಏನೂ ಇರಲಿಲ್ಲ. ಈ ಬಗ್ಗೆ ಕೆಎಂಎಫ್ ಅಧ್ಯಕ್ಷರ ಜತೆ ಚರ್ಚಿಸಿದ್ದು, ಜನರ ಧಾರ್ಮಿಕ ಭಾವನೆಗಳಿಗೆ ಯಾರು ಧಕ್ಕೆ ತರಬಾರದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಶ್ಚಿಮ ವಲಯದ ಬೀದಿ ನಾಯಿಗಳಿಗೆ ಪ್ರಾಯೋಗಿಕವಾಗಿ ಮೈಕ್ರೋ ಚಿಪ್ ಅಳವಡಿಕೆ ಮಾಡುವ ಕಾರ್ಯಕ್ಕೆ ಚಾಲನೆ ನೀಡಲಾಗಿದೆ ಎಂದು ಆರೋಗ್ಯ ಹಾಗೂ ಪಶುಪಾಲನಾ ವಿಭಾಗದ ವಿಶೇಷ ಆಯುಕ್ತ ಸುರಳ್ಕರ್ ವಿಕಾಸ್ ಕಿಶೋರ್ ತಿಳಿಸಿದ್ದಾರೆ. ಪಶ್ಚಿಮ ವಲಯದ ಮತ್ತಿಕೆರೆ ಹಾಗೂ ಮಲ್ಲೇಶ್ವರಂ ವ್ಯಾಪ್ತಿಯಲ್ಲಿನ ಬೀದಿ ನಾಯಿಗಳಿಗೆ ಮೈಕ್ರೋ ಚಿಪ್ ಪ್ರಾಯೋಗಿಕವಾಗಿ ಅಳವಡಿಸಲಾಗುತ್ತಿದ್ದು, ಮೈಕ್ರೋ ಚಿಪ್ ತಂತ್ರಜ್ಞಾನದಿಂದ ನಾಯಿಯ ವಾಸಸ್ಥಳ, ಲಸಿಕೆ ನೀಡಿದ ದಿನಾಂಕ, ಸಂತಾನಹರಣ ಶಸ್ತ್ರಚಿಕಿತ್ಸೆ ಮಾಡಿದ ದಿನಾಂಕ ಹಾಗೂ ಇನ್ನಿತರ ಅಂಶಗಳನ್ನು ಶಾಶ್ವತವಾಗಿ ಅದರಲ್ಲಿ ಶೇಖರಿಸಿಡಿಸಬಹುದಾಗಿದೆ. ಮೈಕ್ರೋ ಚಿಪ್ ತಂತ್ರಜ್ಞಾನವನ್ನು ಈಗಾಗಲೇ ಹಲವಾರು ಸ್ಥಳೀಯ ಸಂಸ್ಥೆಗಳು ಬೀದಿ ನಾಯಿಗಳಿಗೆ ಅಳವಡಿಸಿಕೊಂಡಿದ್ದು, ಪಾಲಿಕೆ ವ್ಯಾಪ್ತಿಯಲ್ಲಿ ಬಿಜ್ ಆರ್ಬಿಟ್ ಎಂಬ ಸಂಸ್ಥೆಯ ಸಹಯೋಗದೊಂದಿಗೆ ಪ್ರಾಯೋಗಿಕವಾಗಿ ಬೀದಿ ನಾಯಿಗಳಿಗೆ ಅಳವಡಿಕೆ ಮಾಡಲಾಗುತ್ತಿದೆ. ಮೈಕ್ರೋಚಿಪ್ ಒಂದು ಅಕ್ಕಿಕಾಳು ಗಾತ್ರದ ಸಾಧನವಾಗಿದ್ದು, ಪ್ರಾಣಿಗಳಲ್ಲಿ ಶಾಶ್ವತ ಗುರುತಿನ ವಿಧಾನವಾಗಿರುತ್ತದೆ. ಇದನ್ನು ಪ್ರಾಣಿಗಳ ಚರ್ಮದ ಕೆಳಗೆ ಇಂಜೆಕ್ಷನ್ ಮೂಲಕ ಇರಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಮುಂಬರುವ ದಿನಗಳಲ್ಲಿ ದೇಶವನ್ನು ವಿಶ್ವದ ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ಸಾಲಿಗೆ ತರಲು ಪ್ರತಿಯೊಬ್ಬರು ಸಕ್ರಿಯ ಪ್ರಯತ್ನಗಳನ್ನು ಮಾಡಬೇಕಾಗಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ಅಂತಾರಾಷ್ಟ್ರೀಯ ಜೈನ ಸಾಹಿತ್ಯ ಸಂಗಮದ ಪರಿವಾರದಿಂದ ಮುಂಬೈನಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಸಮಾವೇಶದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸ್ವಾತಂತ್ರ್ಯದ ನಂತರ ದೇಶವು ಪ್ರತಿಯೊಂದು ಕ್ಷೇತ್ರದಲ್ಲೂ ಅಭೂತಪೂರ್ವ ಪ್ರಗತಿ ಸಾಧಿಸಿದ್ದು, ದೇಶದ ಆರ್ಥಿಕತೆಯನ್ನು ಬಲಪಡಿಸಿದೆ. ಪ್ರಸ್ತುತ ನಮ್ಮ ಆರ್ಥಿಕತೆಯು ವಿಶ್ವದ ೫ನೇ ಅತಿದೊಡ್ಡ ಆರ್ಥಿಕತೆಯಾಗಿದೆ. ಇದನ್ನು ಮತ್ತಷ್ಟು ಉನ್ನತ ಸ್ಥಾನಕ್ಕೆ ಕೊಂಡೊಯ್ಯಲು ಪ್ರತಿಯೊಬ್ಬರು ಸಹಕಾರ ನೀಡಬೇಕು ಎಂದು ಕರೆ ನೀಡಿದರು.

<><*<><>*><>

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಇಂದು ಚನ್ನಪಟ್ಟಣದ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದಿಂದ ೨೫ ಫಲಾನುಭವಿಗಳಿಗೆ ಸಾರಥಿ ಯೋಜನೆಯಲ್ಲಿ ಸಹಾಯಧನ ಮಂಜೂರಾತಿ ಪತ್ರ ವಿತರಣೆ ಕಾರ್ಯಕ್ಕೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ೨ ಸಾವಿರದ ೬೯ ಅರ್ಜಿದಾರರಿಗೆ ನಿವೇಶನ, ೨ ಸಾವಿರದ ೩೦೦ ವಸತಿ ವಿತರಣೆ ಹಾಗೂ ೨೦೦ ಕೋಟಿ ವೆಚ್ಚದ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. ಇದೇ ವೇಳೆ ಮಾತನಾಡಿದ ಅವರು, ಚನ್ನಪಟ್ಟಣದಲ್ಲಿ ರಾಜಕೀಯ ಮಾಡಲು ಬಂದಿಲ್ಲ. ಅಭಿವೃದ್ಧಿ ಯೋಜನೆಗಳನ್ನು ಕೈಗೊಳ್ಳಲು ಬಂದಿದ್ದೇನೆ ಎಂದು ಸ್ಪಷ್ಟಪಡಿಸಿದರು.

<><*<><>*><>

ಯಾವುದೇ ಶಿಕ್ಷಣ ಸಂಸ್ಥೆಯ ಮೂಲಾಧಾರಗಳೆಂದರೆ ಶಿಕ್ಷಕರು. ಯುವ ಮನಸ್ಸುಗಳನ್ನು ರೂಪಿಸುವುದು, ಸಂಸ್ಕಾರ, ಸಂಸ್ಕೃತಿ, ಮಾನವೀಯತೆಯ ಪಾಠವನ್ನು ಹೇಳಿಕೊಟ್ಟು ಉತ್ತಮ ಪ್ರಜೆಗಳನ್ನಾಗಿ ರೂಪಿಸುವ ರೂವಾರಿಗಳೇ ಶಿಕ್ಷಕರು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ ಶಿಕ್ಷಕರ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ವೈದ್ಯಕೀಯ ಶಿಕ್ಷಣದಲ್ಲಿ ಶಿಕ್ಷಕರನ್ನು ಗುರುತಿಸುವುದು ಮತ್ತು ಪ್ರಶಸ್ತಿ ನೀಡುವುದು ಅತ್ಯಗತ್ಯವಾಗಿದೆ. ಶ್ರೇಷ್ಠತೆ ಮತ್ತು ಆರೋಗ್ಯ ವ್ಯವಸ್ಥೆಯ ನಿರಂತರ ಬೆಳವಣಿಗೆಯನ್ನು ಖಾತ್ರಿಪಡಿಸುವುದು ನಮ್ಮ ಮುಖ್ಯ ಗುರಿಯಾಗಿದೆ ಎಂದು ಅಭಿಪ್ರಾಯಪಟ್ಟರು.

<><*<><>*><>

ಇಂದಿನಿಂದ ಇದೇ ೨೪ರವರೆಗೆ ಧಾರವಾಡದ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ನಡೆಯುತ್ತಿರುವ "ಕೃಷಿ ಮೇಳ-೨೦೨೪"ರ ಅಂಗವಾಗಿ ಆಯೋಜಿಸಿದ್ದ ಬೀಜ ಮೇಳವನ್ನು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಹವಾಮಾನ ಬದಲಾವಣೆಯ ವಿವಿಧ ಅಂಶಗಳ ಕುರಿತು ರೈತರಿಗೆ ಮಾಹಿತಿ ನೀಡುವುದು ಕೃಷಿ ಮೇಳದ ಉದ್ದೇಶವಾಗಿದೆ ಎಂದು ತಿಳಿಸಿದರು. 'ಹವಾಮಾನ ವೈಪರೀತ್ಯ ನಿರ್ವಹಣೆಗೆ ಕೃಷಿ ತಾಂತ್ರಿಕತೆಗಳು' ಎಂಬ ಘೋಷವಾಕ್ಯದೊಂದಿಗೆ ಈ ಬಾರಿಯ ಧಾರವಾಡ ಕೃಷಿ ಮೇಳ ೨೦೨೪ ನಡೆಯಲಿದೆ. ಕೃಷಿ ಮೇಳದ ಮೂಲಕ ಅಲ್ಪ ಸಮಯದಲ್ಲಿ ಹೆಚ್ಚಿನ ಸಂಖ್ಯೆಯ ರೈತರಿಗೆ ಕೃಷಿ ತಂತ್ರಜ್ಞಾನಗಳನ್ನು ತಲುಪಿಸುವುದು ಮೇಳದ ಮುಖ್ಯ ಉದ್ದೇಶವಾಗಿದ್ದು, ಮೇಳದಲ್ಲಿ ಮೊದಲ ಬಾರಿಗೆ 'ಸ್ಟಾರ್ಟ್ ಅಪ್ ಪೆವಿಲಿಯನ್' ವ್ಯವಸ್ಥೆಯನ್ನೂ ಮಾಡಲಾಗಿದೆ. ರೈತರ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ಮಳಿಗೆಗಳನ್ನು ಸಜ್ಜುಗೊಳಿಸಲಾಗಿದ್ದು, ಬೀಜ ಪೂರೈಕೆ ಸರಪಳಿಯಲ್ಲಿ ಕಂಡುಬರುವ ಅಡೆತಡೆಗಳನ್ನು ನಿಭಾಯಿಸಲು ಬೀಜ ಮೇಳ ಆಯೋಜಿಸಿರುವುದು, ಕೃಷಿಕರಿಗೆ ಸಹಾಯಕಾರಿಯಾಗಿದೆ ಎಂದು ತಿಳಿಸಿದರು.

<><*<><>*><>

ಸಿದ್ದಪ್ಪ ಕಂಬಳಿ ಅವರ ವಿಚಾರಗಳು, ದೂರದೃಷ್ಟಿ ಇಂದಿಗೂ ಪ್ರಸ್ತುತವಾಗಿವೆ. ಅವರ ಸಾಧನೆಗಳನ್ನು ಯುವಜನರಿಗೆ ತಿಳಿಯ ಪಡಿಸುವ ಕಾರ್ಯಗಳು ಆಗಬೇಕು ಎಂದು ಅರಣ್ಯ ಸಚಿವ ಈಶ್ವರ ಬಿ.ಖಂಡ್ರೆ  ತಿಳಿಸಿದ್ದಾರೆ. ಹುಬ್ಬಳ್ಳಿಯ ಅಳಗುಂಡಿ ಓಣಿಯಲ್ಲಿನ ಸಿದ್ದಪ್ಪ ಕಂಬಳಿ ಅವರ ನಿವಾಸಕ್ಕೆ  ಭೇಟಿ ನೀಡಿ ಮಾತನಾಡಿದ ಅವರು, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುವ ಕಂಬಳಿಯವರು ನಮ್ಮೆಲ್ಲರಿಗೂ ಆದರ್ಶಪ್ರಾಯರಾಗಿದ್ದಾರೆ. ಜೀವನ ಸಾಧನೆಗಳನ್ನು ಸಂರಕ್ಷಿಸಿ, ಕಾಪಾಡಿಕೊಂಡು ಹೋಗುತ್ತಿರುವ ಅವರ ಕುಟುಂಬಸ್ಥರಿಗೆ ಧನ್ಯವಾದ ತಿಳಿಸಿದರು.

<><*<><>*><>

ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಆಯುಷ್ಮಾನ್ ಭಾರತ್ ಹೆಲ್ತ್ ಇನ್‌ಫ್ರಾಸ್ಟ್ರಕ್ಚರ್ ಮಿಷನ್ ಯೋಜನೆಯಡಿ ದಕ್ಷಿಣ ಕನ್ನಡ ಜಿಲ್ಲೆಗೆ ಒಟ್ಟು ೨೫ ಕೋಟಿ ೧೧ ಲಕ್ಷ ರೂಪಾಯಿ ಅನುದಾನ ಬಿಡುಗಡೆಯಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಹೇಳಿದ್ದಾರೆ. ಬಿಡುಗಡೆಯಾದ ಅನುದಾನದ ಪೈಕಿ ೨೪ ಕೋಟಿ ರೂಪಾಯಿ ವೆಚ್ಚದಲ್ಲಿ ವೆನ್ಲಾಕ್ ಆಸ್ಪತ್ರೆಯ ಆವರಣದಲ್ಲಿ ಕ್ರಿಟಿಕಲ್ ಕೇರ್ ಯೂನಿಟ್ ಕಟ್ಟಡ ನಿರ್ಮಾಣ ಕಾಮಗಾರಿಗೆ ಅನುಮೋದನೆ ನೀಡಲಾಗಿದೆ. ಇನ್ನುಳಿದ ಹಲವು ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಮುಕ್ತಾಯಗೊಂಡಿದ್ದು ಶೀಘ್ರದಲ್ಲೇ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದು ತಿಳಿಸಿದ್ದಾರೆ

<><*<><>*><>

ದಾವಣಗೆರೆಯಲ್ಲಿ ನಡೆದ ಗಣೇಶ ವಿಸರ್ಜನಾ ಮೆರವಣಿಗೆ ಮೇಲೆ ಕಲ್ಲು ತೂರಾಟ ಮತ್ತು ನಂತರ ನಡೆದ ಗಲಭೆ ಪ್ರಕರಣವನ್ನು ರಾಷ್ಟ್ರೀಯ ತನಿಖಾ ದಳಕ್ಕೆ ವಹಿಸುವಂತೆ ಕೇಂದ್ರ ಸರಕಾರಕ್ಕೆ ಮನವಿ ಮಾಡಲಾಗುವುದು ಎಂದು ಮಾಜಿ ಸಂಸದ  ಜಿ.ಎಂ.ಸಿದ್ದೇಶ್ವರ್ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಘಟನೆಗೆ ಕಾರಣರಲ್ಲದ ಅಮಾಯಕನ್ನು ಬಂಧಿಸುತ್ತಿರುವುದು ಸರಿಯಲ್ಲ. ಸರಿಯಾದ ಸಾಕ್ಷಿ ಆಧಾರಗಳನ್ನು ಇಟ್ಟುಕೊಂಡು ಪೊಲೀಸರು  ಗಲಭೆಕಾರಣರಾದವನ್ನು ಮಾತ್ರವೇ ಬಂಧಿಸಬೇಕೆಂದು ಆಗ್ರಹಿಸಿದ್ದಾರೆ.

<><*<><>*><>

ವಿಜಯನಗರ ಜಿಲ್ಲೆಯ ಕಮಲಾಪುರದಲ್ಲಿ ಮತ್ತು ಹರಪನಹಳ್ಳಿಯಲ್ಲಿ  ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಸ್ವಚ್ಚತಾ ಹೀ ಸೇವಾ ಅಂಗವಾಗಿ ಹರಪನಹಳ್ಳಿ  ನ್ಯಾಯಾಲಯದ ಆವರಣದಲ್ಲಿ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.  ವೈಯಕ್ತಿಕ ಸ್ವಚ್ಛತೆಯ ಜೊತೆ ಪರಿಸರ ಸ್ವಚ್ಛತೆ ಕಾಪಾಡುವುದು ಹಾಗೂ ಪರಿಸರ ಸಂರಕ್ಷಣೆ ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ್ ಒರಡಿಯಾ ತಿಳಿಸಿದ್ದಾರೆ. ಜಿಲ್ಲಾ ಪಂಚಾಯಿತಿ ಕಚೇರಿ ಆವರಣದಲ್ಲಿ ಆಯೋಜಿಸಲಾಗಿದ್ದ ಸ್ವಚ್ಛತೆಯಡಿಗೆ ದಿಟ್ಟ ಹೆಜ್ಜೆ ಹಾಗೂ ತಾಯಿಯ ಹೆಸರಲ್ಲಿ ಒಂದು ಗಿಡ ಅಭಿಯಾನದ ಅಂಗವಾಗಿ

ಸಸಿ ನೆಟ್ಟು ಮಾತನಾಡಿದ ಅವರು, ಇಂದಿನ ಯುವ ಪೀಳಿಗೆಯಲ್ಲಿ, ಮಕ್ಕಳಲ್ಲಿ ಪರಿಸರದ ಕಾಳಜಿ ಹೆಚ್ಚಿಸಬೇಕಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ನಾವು ವಾಸಿಸುವ ಮನೆಗಳ ಸುತ್ತ-ಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರಲ್ಲೂ ಸ್ವಚ್ಛತೆಯ ಅರಿವು ಅಗತ್ಯವಿದೆ ಎಂದು ತುಮಕೂರು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಭು ಜಿ. ತಿಳಿಸಿದ್ದಾರೆ. ಸ್ವಚ್ಛತಾ ಅಭಿಯಾನದ ಅಂಗವಾಗಿ ಹಾಸನ ನಗರದ ರಿಂಗ್ ರಸ್ತೆಯ ಬಳಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ. ಸತ್ಯಭಾಮಾ ಭಾಗಿಯಾದರು. ನೂರಾರು ಕಾಲೇಜು ವಿದ್ಯಾರ್ಥಿಗಳು, ನಗರಸಭೆ ಸಿಬ್ಬಂದಿ, ವಿವಿಧ ಇಲಾಖೆ ಅಧಿಕಾರಿಗಳು ಭಾಗಿಯಾಗಿದ್ದು ಸ್ವಚ್ಛತೆ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

**<><*<><>*><>**

ಸಂಕ್ಷಿಪ್ತ ಸುದ್ದಿಗಳು

೧. ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ತಾಲ್ಲೂಕು ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ೨೦೨೩-೨೪ ನೇ ಸಾಲಿನಲ್ಲಿ ೧ ಕೋಟಿ ೮೫ ಲಕ್ಷ ರೂಪಾಯಿ ಲಾಭದಲ್ಲಿದೆ ಎಂದು ಬ್ಯಾಂಕ್‌ನ ಅಧ್ಯಕ್ಷ ಡಿ.ಸಿ.ರಾಮಚಂದ್ರ ತಿಳಿಸಿದ್ದಾರೆ.

೨. ಕೊಡಗು ಜಿಲ್ಲೆಯ ಕುಶಾಲನಗರ ಪಟ್ಟಣ ಪಂಚಾಯಿತಿಯ ೨ನೇ ಅವಧಿಗೆ ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆ ಇದೇ ೨೫ರಂದು ನಿಗದಿಯಾಗಿದೆ. ಇಬ್ಬರು ನಾಮ ನಿರ್ದೇಶಿತ ಸದಸ್ಯರಿಗೆ ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಲು ತಹಶೀಲ್ದಾರ್ ಅವಕಾಶ ನೀಡಿದ್ದಾರೆ ಎಂದು ಆರೋಪಿಸಿ ಬಿಜೆಪಿ ಪ್ರಮುಖರು ಹಾಗೂ ಪುರಸಭೆಯ ಬಿಜೆಪಿ ಸದಸ್ಯರು ತಾಲ್ಲೂಕು ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸಿದರು.

೩. ವಿಶ್ವ ಪ್ರವಾಸೋದ್ಯಮ ದಿನಾಚರಣೆದ ಪ್ರಯುಕ್ತ ಇದೇ ೨೭ ರಂದು ಚಿಕ್ಕಬಳ್ಳಾಪುರ ಜಿಲ್ಲೆಯ ವಿಶ್ವವಿಖ್ಯಾತ ನಂದಿಗಿರಿಧಾಮದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪ್ರವಾಸೋದ್ಯಮ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಪ್ರವಾಸೋದ್ಯಮ ಇಲಾಖೆ ಪ್ರಕಟಣೆ ತಿಳಿಸಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <><*<>**